ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

File No: DTE-ADMI0ACM2/12/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:20-10-2020.

-:: ಸುತ್ತೋಲೆ ::-

**ವಿಷಯ:** 2020-21ನೇ ಸಾಲಿನಲ್ಲಿ ಪೋಸ್ಟ್ ಡಿಪ್ಲೋಮಾ ಕೋರ್ಸುಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**
1. ಈ ಕಛೇರಿ ಪ್ರವೇಶಾಧಿಸೂಚನೆ ದಿನಾಂಕ:02-09-2020.
2. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:03-10-2020.
3. ನಿರ್ದೇಶಕರು, ರಾಜೀವ್ ಗಾಂಧಿ ಇನ್ಸ್ಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್ಲು ಇವರ ಪತ್ರ 2020-21/13, ದಿ:11-09-2020.

-00000000-

2020-21ನೇ ಸಾಲಿಗೆ ಪೋಸ್ಟ್ ಡಿಪ್ಲೋಮಾ ಕೋರ್ಸುಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಲು ಅಂತಿಮ ದಿ:20-10-2020 ಎಂದು ನಿಗಧಿಪಡಿಸಿ ದಿ:21-10-2020ರ ಒಳಗೆ ಪ್ರವೇಶಾತಿಯನ್ನು ನೀಡಲು ಉಲ್ಲೇಖ(2)ರ ಈ ಕಛೇರಿ ಸುತ್ತೋಲೆಯಲ್ಲಿ ನಿಗಧಿಪಡಿಸಲಾಗಿತ್ತು. ಉಲ್ಲೇಖ(3)ರ ಪತ್ರದಲ್ಲಿ ಪ್ರವೇಶ ಕೋರಿ ಕಡಿಮೆ ಅರ್ಜಿಗಳು ಸ್ವೀಕೃತವಾಗಿರುವುದರಿಂದ, ಇನ್ನು ಹೆಚ್ಚಿನ ಅರ್ಜಿಗಳು ಸ್ವೀಕೃತವಾಗುವ ಸಂಭವವಿರುವುದರಿಂದ, ಪ್ರವೇಶಾವಧಿಯನ್ನು ವಿಸ್ತರಿಸುವಂತೆ ಮನವಿ ಕೋರಿರುತ್ತಾರೆ.

ಈ ಸಂಬಂಧದಲ್ಲಿ ಮನವಿಯನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ **ಅರ್ಜಿ ವಿತರಿಸಲು ಹಾಗೂ ಸ್ವೀಕರಿಸಲು ಅಂತಿಮ ದಿ:29-10-2020 ರವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.**

ಮೇಲೆ ನಮೂದಿಸಿರುವಂತೆ ಕೂಡಲೇ ಕ್ರಮ ತೆಗೆದುಕೊಂಡು ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡಿ, ನಿಯಮಗಳ ಪ್ರಕಾರ **ದಿ:29-10-2020** ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪ್ರಿನ್ಸಿಪಾಲರುಗಳು ತಮ್ಮ ಹಂತದಲ್ಲಿಯೇ ಅರ್ಹ ಅಭ್ಯರ್ಥಿಗಳ ಪ್ರವೇಶ ಪ್ರಕ್ರಿಯೆ ಪೂರ್ಣಗೊಳಿಸತಕ್ಕದ್ದು. ಪ್ರಯುಕ್ತ, ಇದನ್ನು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

*ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ.*

ನಿರ್ದೇಶಕರು

ಗೆ,

1. ಪ್ರಿನ್ಸಿಪಾಲರು, ಸರ್ಕಾರಿ ಎಸ್.ಜೆ.ಪಾಲಿಟೆಕ್ನಿಕ್, ಬೆಂಗಳೂರು
2. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ಬಳ್ಳಾರಿ
3. ಪ್ರಿನ್ಸಿಪಾಲರು, ಎಂ.ಎಸ್.ರಾಮಯ್ಯ ಪಾಲಿಟೆಕ್ನಿಕ್, ಬೆಂಗಳೂರು
4. ಪ್ರಿನ್ಸಿಪಾಲರು, ರಾಜೀವ್‌ಗಾಂಧಿ ಇನ್ಸ್ಟಿಟ್ಯೂಟ್ ಆಫ್ ಸ್ಟೀಲ್ ಟೆಕ್ನಾಲಜಿ, ತೋರಣಗಲ್, ಬಳ್ಳಾರಿ ಜಿಲ್ಲೆ.

} ಸದರಿ ಸುತ್ತೋಲೆಯನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳಿಗೆ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸುವುದು ಹಾಗೂ ಸ್ಥಳೀಯ ದಿನಪತ್ರಿಕೆಗಳಲ್ಲಿ ಪ್ರಕಟಣೆ ನೀಡುವುದು.